# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 241 |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 06.12.2023 |
| ಉತ್ತರಿಸುವ ಸಚಿವರು | : | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2022-23ನೇ ಆಯವ್ಯಯ ಘೋಷಣೆಯಲ್ಲಿ ಸರ್ಕಾರವು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ವಿವಿಧ ಯೋಜನೆ ಗಳಡಿಯಲ್ಲಿ ಬಹುವಿಧ ವಸತಿ ಶಾಲೆಗಳನ್ನು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳನ್ನು ಒಂದುಗೂಡಿಸಲಾಗುವುದು ಎನ್ನಲಾಗಿದ್ದು, ಇದು ಕಾರ್ಯರೂಪಕ್ಕೆ ಬಂದಿದೆಯೇ; | ❖ 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ವಿವಿಧ ಯೋಜನೆಗಳಡಿಯಲ್ಲಿ ಬಹುವಿಧ ವಸತಿ ಶಾಲೆಗಳನ್ನು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳನ್ನು ಒಂದುಗೂಡಿಸಿ "ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ" ಎಂದು ನಾಮಕರಣ ಮಾಡಿ ಸಿಬಿಎಸ್ಇ ಪಠ್ಯಕ್ರಮದಂತೆ 29 ಜಿಲ್ಲೆಗಳಲ್ಲಿ ಪ್ರಾರಂಭಿಸಿ ನಿರ್ವಹಿಸಲಾಗುತ್ತಿದೆ.<br>❖ ಈ ಪೈಕಿ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ 16 ಅಲ್ಪಸಂಖ್ಯಾತರ ವಸತಿ ಶಾಲೆಗಳನ್ನು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಪದವಿ ಪೂರ್ವ ಕಾಲೇಜುಗಳೊಂದಿಗೆ ಒಂದುಗೂಡಿಸಿ, "ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ" ಗಳೆಂದು ಮರುನಾಮಕರಣ ಮಾಡಲಾಗಿರುತ್ತದೆ.<br>❖ ಅಲ್ಪಸಂಖ್ಯಾತರ ಪದವಿ ಪೂರ್ವ ವಸತಿ ಕಾಲೇಜುಗಳಿಲ್ಲದ 13 ಜಿಲ್ಲೆಗಳಲ್ಲಿ ಹೊಸದಾಗಿ 10(ಹತ್ತು) ಅಲ್ಪಸಂಖ್ಯಾತರ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಿ ಸಂಬಂಧಪಟ್ಟ ವಸತಿ ಶಾಲೆಗಳೊಂದಿಗೆ ವಿಲೀನಗೊಳಿಸಿ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳೆಂದು ಮರುನಾಮಕರಣ ಮಾಡಲಾಗಿರುತ್ತದೆ. ಉಳಿದ 3 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳನ್ನು ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳೆಂದು ಮರುನಾಮಕರಣ ಮಾಡಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಸದರಿ 3 ಜಿಲ್ಲೆಗಳ ಪೈಕಿ ಬೆಳಗಾವಿ ಜಿಲ್ಲೆಯ ಹುಲಿಕಟ್ಟೆ ಮತ್ತು ಚಿತ್ರದುರ್ಗ ಜಿಲ್ಲೆಯ ಮದೇಹಳ್ಳಿಯಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಆರಂಭಿಸಲಾಗಿರುತ್ತದೆ. |
| ಆ) | ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಲ್ಲಿನ ವಸತಿ ಶಾಲೆಗಳಿರುವ ಪ್ರತಿ ಜಿಲ್ಲೆಯ ಕನಿಷ್ಠ ಒಂದು ಶಾಲೆಯಲ್ಲಿ ಪದವಿ ಪೂರ್ವ ತರಗತಿಗಳನ್ನು ಆರಂಭಿಸಿ, ಸ್ಮಾರ್ಟ್ ಕ್ಲಾಸ್, ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯವನ್ನು ಒದಗಿಸಿ ಉನ್ನತೀಕರಿಸಲಾಗುವುದು ಎಂದು 2022-23ನೇ ಆಯವ್ಯಯದಲ್ಲಿ 25 ಕೋಟಿ ಹಂಚಿಕೆ ಮಾಡಲಾಗುವುದೆಂದು ಸರ್ಕಾರ ಘೋಷಣೆ ಮಾಡಿದ್ದು, ಇದು ಇಲಾಖೆ ವ್ಯಾಪ್ತಿಯಲ್ಲಿ ಘೋಷಣೆಯಾಗಿದೆಯೇ; ಹಾಗಿದ್ದಲ್ಲಿ, ಹಂತ ಹಂತವಾಗಿ 25 ಕೋಟಿಗಳನ್ನು ಯಾವ ಯಾವ ಕಾರ್ಯಕ್ಕೆ ಹಂಚಿಕೆ ಮಾಡಲಾಗಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ವಸತಿ ಶಾಲೆಗಳಿರುವ ಪ್ರತಿ ಜಿಲ್ಲೆಯ ಕನಿಷ್ಠ ಒಂದು ಶಾಲೆಯಲ್ಲಿ ಪದವಿ ಪೂರ್ವ ತರಗತಿಗಳನ್ನು ಆರಂಭಿಸಿ, ಸ್ಮಾರ್ಟ್ ಕ್ಲಾಸ್, ಕಂಪ್ಯೂಟರ್ ಮತ್ತು ವಿಜ್ಞಾನ ಪ್ರಯೋಗಾಲಯವನ್ನು ಒದಗಿಸಿ ಉನ್ನತೀಕರಿಸಲು ಸರ್ಕಾರ ರೂ.25.00ಕೋಟಿಗಳನ್ನು ಒದಗಿಸಲಾಗಿರುತ್ತದೆ. ಸದರಿ ರೂ.25.00 ಕೋಟಿಗಳನ್ನು ಈ ಕೆಳಕಂಡಂತೆ ಹಂಚಿಕೆ ಮಾಡಲಾಗಿರುತ್ತದೆ. |

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಒದಗಿಸಿದ ಮೂಲಸೌಕರ್ಯಗಳು | ವೆಚ್ಚ |
|---|---|---|
| 1 | ಸ್ಮಾರ್ಟ್ ಕ್ಲಾಸ್‌ಗಳ ಸೌಲಭ್ಯ | 285.00 |
| 2 | ಕಂಪ್ಯೂಟರ್ ಮತ್ತು ಇಂಟರ್ನೆಟ್ ಸೌಲಭ್ಯ | 183.39 |
| 3 | ವಿಜ್ಞಾನ ಪ್ರಯೋಗಾಲಯ ಒದಗಿಸಲು | 126.00 |
| 4 | ಸಿ.ಬಿ.ಎಸ್.ಇ ಪರೀಕ್ಷಾ ಮಂಡಳಿ ಮಾನ್ಯತೆ ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಪಡೆಯಲು ವೆಚ್ಚ | 295.38 |
| 5 | ಸಿ.ಬಿ.ಎಸ್.ಇ ಪಠ್ಯಕ್ರಮಕ್ಕೆ ಅನುಗುಣವಾಗಿ ಕಲಿಕಾ, ಬೋಧನಾ ಸಾಮಗ್ರಿ, ಪಠ್ಯಪುಸ್ತಕ ಹಾಗೂ ಇತರೆ | 318.74 |
| 6 | ಉನ್ನತೀಕರಿಸಿದ ವಸತಿ ಶಾಲೆಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳು | 839.68 |
| 7 | ಹೊಸದಾಗಿ ಮಂಜೂರಾದ 10 ಅಲ್ಪಸಂಖ್ಯಾತರ ಪದವಿ ಪೂರ್ವ ಕಾಲೇಜುಗಳಿಗೆ ಅಗತ್ಯ ಸೌಲಭ್ಯಗಳು | 150.00 |
| 8 | ಶಾಲೆಗಳ ನವೀಕರಣ ಉನ್ನತೀಕರಣ, ನಾಮಫಲಕ ಅಳವಡಿಕೆ ಹಾಗೂ ಇತರೆ ಮೂಲಭೂತ ಸೌಕರ್ಯಗಳ ಒದಗಿಸಲು | 301.81 |
| | **ಒಟ್ಟು** | **2,500.00** |

<table>
<tr>
<td>ಇ)</td>
<td>ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 100 ವಿದ್ಯಾರ್ಥಿನಿಲಯಗಳಲ್ಲಿನ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲು ರೂ.10 ಕೋಟಿಗಳನ್ನು 2022-23ನೇ ಆಯವ್ಯಯದಲ್ಲಿ ಅನುದಾನ ಒದಗಿಸಲಾಗುವುದು ಎಂದು ಸರ್ಕಾರವು ಘೋಷಣೆ ಮಾಡಿದ್ದು, ಅನುದಾನ ಬಿಡುಗಡೆಯಾಗಿದೆಯೇ; ಹಾಗಿದ್ದಲ್ಲಿ, ಇಲಾಖೆ ವ್ಯಾಪ್ತಿಯಲ್ಲಿ ದಾಖಲಾತಿ ಹೆಚ್ಚಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; ಅನುದಾನವನ್ನು ಯಾವ ರೀತಿಯಲ್ಲಿ ಬಳಕೆ ಮಾಡಲಾಗಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು)</td>
<td>
❖ 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಮೆಟ್ರಿಕ್ ನಂತರದ 100 ವಿದ್ಯಾರ್ಥಿನಿಲಯಗಳಲ್ಲಿನ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲು ಸರ್ಕಾರ ರೂ.10.00 ಕೋಟಿಗಳನ್ನು ಒದಗಿಸಲಾಗಿರುತ್ತದೆ.<br>
❖ ರೂ.10.00 ಕೋಟಿಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿರ್ವಹಣೆ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.<br>
❖ ಈಗಾಗಲೇ ಬೇಡಿಕೆ ಹೆಚ್ಚಾಗಿದ್ದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲ ಹೆಚ್ಚಿಸಿರುವುದರಿಂದ ದಾಖಲಾತಿ ಹೆಚ್ಚಿಸಲು ಜಿಲ್ಲಾ ಹಂತದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಸ್ಥಳಗಳಲ್ಲಿ ಹಾಗೂ ಜಿಲ್ಲಾ/ತಾಲ್ಲೂಕು ಕೇಂದ್ರಗಳ ವಿದ್ಯಾ ಸಂಸ್ಥೆಗಳಲ್ಲಿ ಸೂಕ್ತ ಪ್ರಚಾರವನ್ನು ಕೈಗೊಳ್ಳಲಾಗಿದೆ.<br>
**(ರೂ.ಲಕ್ಷಗಳಲ್ಲಿ)**
<table>
<tr><th>ಕ್ರ. ಸಂ</th><th>ವೆಚ್ಚದ ವಿವರ</th><th>ವೆಚ್ಚ</th></tr>
<tr><td>1</td><td>ಸಂಖ್ಯಾಬಲ ಹೆಚ್ಚಳವಾದ ವಿದ್ಯಾರ್ಥಿ ನಿಲಯಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳಾದ ಕಾಟ್, ಬೆಡ್, ತಟ್ಟೆ, ಲೋಟ ಹಾಗೂ ಇತರೆ ಒದಗಿಸಲು</td><td>300.00</td></tr>
<tr><td>2</td><td>ವಿದ್ಯಾರ್ಥಿನಿಲಯಗಳಲ್ಲಿ ಶೈಕ್ಷಣಿಕ ಪ್ರಗತಿಗಾಗಿ ಗ್ರಂಥಾಲಯ ವ್ಯವಸ್ಥೆ, ಕ್ರೀಡಾ ಸಾಮಾಗ್ರಿ ಹಾಗೂ ಇತರೆಗಳನ್ನು ಒದಗಿಸಲು</td><td>200.00</td></tr>
<tr><td>3</td><td>ವಿದ್ಯಾರ್ಥಿನಿಲಯಗಳ ಆಹಾರ ವೆಚ್ಚ ಹಾಗೂ ನಿರ್ವಹಣೆ</td><td>500.00</td></tr>
<tr><td colspan="2">ಒಟ್ಟು</td><td>1000.00</td></tr>
</table>
</td>
</tr>
</table>

**ಸಂಖ್ಯೆ: MWD 102 LMQ 2023**

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತುಅಲ್ಪಸಂಖ್ಯಾತರ ಕಲ್ಯಾಣ
ಸಚಿವರು